ಕರ್ನಾಟಕಸರ್ಕಾರ

ತಾಂತ್ರಿಕಶಿಕ್ಷಣಇಲಾಖೆ

ಸಂ: ಡಿಟಿಇ /21/ಇಎಸ್‌ಟಿ(10) 2021

ಆಯುಕ್ತರ ಕಚೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು- 560 001
ದಿನಾಂಕ: 15.12.2021

# ಹಿಂಬರಹ

ಸರ್ಕಾರ ಆದೇಶಸಂಖ್ಯೆ: ಇಡಿ:167:ಡಿಟಿಇ:2017 ಬೆಂಗಳೂರು ದಿನಾಂಕ: 10 ನೇ ನವೆಂಬರ್-2020ಕ್ಕೆ ಸಂಬಂಧಪಟ್ಟಂತೆ ಮಾನ್ಯ ಉಚ್ಚ ನ್ಯಾಯಲಯದಲ್ಲಿ ದಾಖಲಾಗಿದ್ದ ಪ್ರಕರಣವು ಇತ್ಯರ್ಥವಾಗಿರುವುದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪಾಲಿಟೆಕ್ನಿಕ್‌ಗಳ ಎಲ್ಲಾ ಅಧಿಕಾರಿಗಳು/ಪ್ರಾಂಶುಪಾಲರು/ ಸಿಬ್ಬಂದಿಗಳಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ ರವಾನಿಸಿದೆ.

ಜಂಟಿನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ.

ಇವರಿಗೆ:

ಎಲ್ಲಾ ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ

ಪ್ರತಿ:

1. ಮಹಾಲೇಖಪಾಲರು.,(ಎ&ಇ ಲೆಕ್ಕಪರಿಶೋಧನೆ 1&2) ಕರ್ನಾಟಕ, ಬೆಂಗಳೂರು.
2. ಜಂಟಿನಿರ್ದೇಶಕರು(ಸಿಡಿಸಿ) ತಾಂತ್ರಿಕಶಿಕ್ಷಣಇಲಾಖೆ. ಅರಮನೆ ರಸ್ತೆ. ಬೆಂಗಳೂರು.
3. ಆಡಳಿತಾಧಿಕಾರಿಗಳು,ತಾಂತ್ರಿಕ ಶಿಕ್ಷಣ ಇಲಾಖೆ. ಅರಮನೆ ರಸ್ತೆ. ಬೆಂಗಳೂರು.
4. ಮಾನ್ಯಆಯುಕ್ತರವರ ಆಪ್ತಶಾಖೆ , ಕಾಲೇಜುಮತ್ತುತಾಂತ್ರಿಕಶಿಕ್ಷಣಇಲಾಖೆ. ಅರಮನೆರಸ್ತೆ. ಬೆಂಗಳೂರು.

JD-Admin



ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 969
ದಿನಾಂಕ 11.11.2020

ವಿಷಯ: 2006ರ (ಪರಿಷ್ಕೃತ) ಎ.ಐ.ಸಿ.ಟಿ.ಇ. ವೇತನ ಶ್ರೇಣಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ (ಉಪನ್ಯಾಸಕರಿಗೆ) "ಎ.ಪಿ.ಐ. ಸ್ಕೋರ್ ಆಧಾರಿತ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ"ಯನ್ನು ಅನುಷ್ಠಾನಗೊಳಿಸುವ ಬಗ್ಗೆ.

ಓದಲಾಗಿದೆ:-

19116O3/2020

1. ಎಐಸಿಟಿಇ ಅಧಿಸೂಚನೆ (Pay Scales-Diploma) ಸಂಖ್ಯೆ:F.No.37-3/Legal/2010, ದಿನಾಂಕ: 05-03-2010
2. ಸರ್ಕಾರದ ಆದೇಶ ಸಂಖ್ಯೆ: ಇಡಿ 118 ಡಿಟಿಇ 2010, ದಿನಾಂಕ: 31-03-2011.
3. ಎಐಸಿಟಿಇ ಅಧಿಸೂಚನೆ [CAS Regulation - 2012 (Diploma)] ಸಂಖ್ಯೆ:F.No.37-3/ Legal/AICTE/2012. ದಿನಾಂಕ: 08-11-2012
4. ಎಐಸಿಟಿಇ ಅಧಿಸೂಚನೆ [Clarifications (Diploma/Degree] ಸಂಖ್ಯೆ:F.No.27/ RIFD/ Pay Scale/01/2013-14 ದಿನಾಂಕ: 04-01-2016.
5. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಪತ್ರ ಸಂಖ್ಯೆ: ಡಿಟಿಇ/21/ಇಎಸ್‌ಟಿ(1) ಬಿ/2017/1642/ಎ ದಿನಾಂಕ:31-08-2017.

168
13-11-2020

******

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಎಐಸಿಟಿಇ, ನವದೆಹಲಿ ರವರ ಅಧಿಸೂಚನೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ 6ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿಗಳು, ವಿದ್ಯಾರ್ಹತೆ, ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ ಸೌಲಭ್ಯಗಳು ಮತ್ತು ಇತರೆ ಸೇವಾ ಸೌಲಭ್ಯಗಳನ್ನು ವಿಸ್ತರಿಸಲು ಅವಕಾಶ ಕಲ್ಪಿಸಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಸರ್ಕಾರದ ಆದೇಶದಲ್ಲಿ ದಿನಾಂಕ:05.03.2010 ಎಐಸಿಟಿಇ ಅಧಿಸೂಚನೆಯಲ್ಲಿನ ಸೌಲಭ್ಯಗಳನ್ನು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ದಿನಾಂಕ:01.01.2006ರಿಂದ ಜಾರಿಗೆ ಬರುವಂತೆ ಸರ್ಕಾರವು ಆದೇಶಿಸಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಎಐಸಿಟಿಇ, ನವದೆಹಲಿರವರ ಅಧಿಸೂಚನೆಯಲ್ಲಿ, ಎಐಸಿಟಿಇ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ (ಡಿಪ್ಲೊಮಾ) ಸಂಸ್ಥೆಗಳಲ್ಲಿ ಎಐಸಿಟಿಇ ವೇತನ ಶ್ರೇಣಿಯೊಂದಿಗೆ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿ/ ಉಪನ್ಯಾಸಕರುಗಳಿಗೆ 'ಕೆರಿಯರ್ ಅಡ್ವಾನ್ಸ್‌ಮೆಂಟ್ ಸೌಲಭ್ಯ'ಗಳ ಮಂಜೂರಾತಿ ಕುರಿತಂತೆ **"All India Council for Technical Education (Career Advancement Scheme for the Teachers and other Academic Staff in Technical Institutions) (Diploma) Regulations, 2012"**ನ್ನು ದಿನಾಂಕ:08-11-2012 ರಿಂದ ಜಾರಿಗೊಳಸಲು ನಿಯಮಗಳನ್ನು ರೂಪಿಸಲಾಗಿರುತ್ತದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಎಐಸಿಟಿಇ, ನವದೆಹಲಿರವರು ಹೊರಡಿಸಿರುವ ಅಧಿಸೂಚನೆ "All India Council for Technical Education (Career Advancement scheme for the

DTE (JD-FS) No :
Date : 13/11/2020
Comp No : 1911603

teachers and other academic staff in technical institutions) (Diploma) Regulations 2012"ರಲ್ಲಿ ಕೆಲವೊಂದು ಅಂಶಗಳ ಬಗ್ಗೆ ಸ್ಪಷ್ಟೀಕರಣ ನೀಡಿದ್ದು, ಸದರಿ ಅಧಿಸೂಚನೆಯ ಕ್ರಮ ಸಂಖ್ಯೆ:38ರಲ್ಲಿ ಪಾಲಿಟೆಕ್ನಿಕ್ ಕಾಲೇಜುಗಳ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆಯಡಿ ವೃತ್ತಿ ಪದೋನ್ನತಿ ಸೌಲಭ್ಯವನ್ನು ಮಂಜೂರು ಮಾಡುವಲ್ಲಿ ಎ.ಪಿ.ಐ ಸ್ಕೋರ್‌ನಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಲಾಗಿರುತ್ತದೆ. ಇದನ್ನು ಎಐಸಿಟಿಇ ಅಧೀನದಲ್ಲಿ ಬರುವ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅನ್ವಯಿಸಲು ಸದರಿ ಅಧಿಸೂಚನೆಯಲ್ಲಿ ತಿಳಿಸಿರುತ್ತದೆ.

5. ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ಎಐಸಿಟಿಇಯ ದಿನಾಂಕ:08.11.2012ರ ಅಧಿಸೂಚನೆಯಲ್ಲಿನ ನಿಯಮಗಳನ್ನು ಯಥಾವತ್ತಾಗಿ ಜಾರಿಗೊಳಸಲು ಹಾಗೂ ಎಐಸಿಟಿಇಯ ದಿನಾಂಕ:04.01.2016ರ ಸ್ಪಷ್ಟೀಕರಣದಂತೆ ದಿನಾಂಕ:07.11.2015 ರವರೆಗೆ ಎ.ಪಿ.ಐ. ಸ್ಕೋರ್ ನಿಂದ ವಿನಾಯಿತಿ ನೀಡಿ, ದಿನಾಂಕ:08.11.2015ರಿಂದ ಜಾರಿಗೆ ಬರುವಂತೆ ಎ.ಪಿ.ಐ ಸ್ಕೋರ್ ಆಧಾರಿತ ಕೆರಿಯರ್ ಅಡ್ವಾನ್ಸ್ ಮೆಂಟ್ ಯೋಜನೆಯ ನಿಯಮಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಸುವ ಬಗ್ಗೆ ಮತ್ತು ಎಐಸಿಟಿಇಯು ಕಾಲಕಾಲಕ್ಕೆ ಹೊರಡಿಸುವ ಆದೇಶ/ನಿಯಮ/ತಿದ್ದುಪಡಿ/ಸ್ಪಷ್ಟೀಕರಣವನ್ನು ತಕ್ಷಣವೇ ಅಳವಡಿಸಿಕೊಳ್ಳುವ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸುವ ಸಂಬಂಧ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

6. ಪ್ರಕರಣದಲ್ಲಿ ಒದಗಿ ಬಂದ ಎಲ್ಲಾ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಎಐಸಿಟಿಇ, ನವದೆಹಲಿರವರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಸಿ.ಎ.ಎಸ್ ಸೌಲಭ್ಯ ನೀಡುವಲ್ಲಿ ದಿನಾಂಕ:07.11.2015ರವರೆಗೆ ಎ.ಪಿ.ಐ ಅಂಕಗಳ ಪರಿಗಣನೆಯಿಂದ ವಿನಾಯಿತಿ ನೀಡುವಂತೆ ಸೂಚಿಸಿರುವುದನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 167 ಡಿಟಿಇ 2017,**
**ಬೆಂಗಳೂರು, ದಿನಾಂಕ: 10ನೇ ನವೆಂಬರ್ 2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ ಸೌಲಭ್ಯಗಳನ್ನು All India Council for Technical Education (Career Advancement scheme for the teachers and other Academic staff in Technical Institutions) (Diploma) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಮಂಜೂರು ಮಾಡಲು ಆದೇಶಿಸಿದೆ.

1. All India Council for Technical Education (Career Advancement scheme for the teachers and other Academic staff in Technical Institutions) (Diploma) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಲಾಗಿದೆ. ಉಳಿದಂತೆ ಸದರಿ ನಿಯಮದಲ್ಲಿ ವಿಧಿಸಿರುವ ಇತರೆ ಷರತ್ತುಗಳು ಯಥಾವತ್ತಾಗಿ ಮುಂದುವರೆದು ಅನ್ವಯಿಸತಕ್ಕದ್ದು.

.....3

2. ವೃತ್ತಿ ಪದೋನ್ನತಿ ಮಂಜೂರಾತಿ ಕುರಿತಂತೆ ಎಐಸಿಟಿಇಯು ಹೊರಡಿಸಿರುವ 2010 ಮತ್ತು 2012ರಲ್ಲಿನ ರೆಗ್ಯುಲೇಷನ್ ನಿಯಮಾವಳಿಗಳಲ್ಲಿ ವಿಧಿಸಿರುವ ಇತರೆ ಎಲ್ಲಾ ಅರ್ಹತಾ ಮಾನದಂಡ ಮತ್ತು ಷರತ್ತು ಹಾಗೂ ನಿಬಂಧನೆಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯ ಮತ್ತು ಇತರೇ ಸೇವಾ ಸೌಲಭ್ಯಗಳ ಕುರಿತಂತೆ ಕಾಲಕಾಲಕ್ಕೆ ಎಐಸಿಟಿಇಯು ಹೊರಡಿಸುವ ಆದೇಶ/ನಿಯಮಗಳು/ ತಿದ್ದುಪಡಿಗಳು/ಸ್ಪಷ್ಟೀಕರಣಗಳು ಅನ್ವಯಿಸುತ್ತವೆ.

4. ವೃತ್ತಿ ಪದೋನ್ನತ್ತಿಗೆ ಎ.ಪಿ.ಐ ಅಂಕಗಳ ಪರಿಗಣನೆಯ ವಿನಾಯಿತಿಯು ದಿನಾಂಕ: 07.11.2015ರವರೆಗೆ ಮಾತ್ರ ಚಾಲ್ತಿಯಲ್ಲಿರತಕ್ಕದ್ದು. ಆನಂತರ, ಅಂದರೆ ದಿನಾಂಕ: 08.11.2015ರ ನಂತರದಲ್ಲಿ ಅರ್ಹವಾಗುವ ಎಲ್ಲಾ ಪ್ರಕರಣಗಳಿಗೆ ಎಐಸಿಟಿಇ ರೆಗ್ಯುಲೇಷನ್ ನಿಯಮಾವಳಿಗಳ ಪ್ರಕಾರ ಎ.ಪಿ.ಐ ಅಂಕಗಳ ಪರಿಗಣನೆ ಮತ್ತು ಇತರೆ ಅರ್ಹತಾ ಮಾನದಂಡಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳತಕ್ಕದ್ದು.

5. ಎಐಸಿಟಿಇಯು 2010 ಮತ್ತು 2012ರಲ್ಲಿನ ರೆಗ್ಯುಲೇಷನ್‌ನಲ್ಲಿ ನೀಡಿರುವ ಮಾರ್ಗಸೂಚಿಗಳು/ಷರತ್ತುಗಳು ಹಾಗೂ ಕಾಲಕಾಲಕ್ಕೆ ಹೊರಡಿಸುವ ಸ್ಪಷ್ಟೀಕರಣದಂತೆ ಸಂಶೋಧನೆ, ವಿಸ್ತರಣಾ ಚಟುವಟಿಕೆಗಳು, ಪತ್ರಿಕಾ ಪ್ರಕಟಣೆಗಳು, ಅಲ್ಪಾವಧಿ ತರಬೇತಿಗಳು ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಗಳು ಇತ್ಯಾದಿಗಳನ್ನು ಯಾವ ಬೋಧಕರು ಪೂರೈಸಿರುತ್ತಾರೆಯೋ ಅಂತಹ ಅರ್ಹ ಬೋಧಕರನ್ನು ಮಾತ್ರ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ [CAS]ಯಲ್ಲಿ ಪರಿಗಣಿಸುವುದು. ಯಾವ ಬೋಧಕ ಸಿಬ್ಬಂದಿಯು ಎಐಸಿಟಿಇಯು ನಿಗದಿಪಡಿಸಿರುವ ವಿದ್ಯಾರ್ಹತೆಗಳನ್ನು ನಿಗದಿತ ದಿನಾಂಕದ ನಂತರ ಪಡೆದಿರುತ್ತಾನೆಯೋ, ಅಂತಹ ಬೋಧಕ ಸಿಬ್ಬಂದಿಗೆ ಅವನು ವಿದ್ಯಾರ್ಹತೆಯನ್ನು ಪೂರೈಸಿದ ದಿನಾಂಕದಿಂದ ಜಾರಿಗೆ ಬರುವಂತೆ ಸಿ.ಎ.ಎಸ್. ಯೋಜನೆಯ ಸೌಲಭ್ಯಗಳನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಸಿ.ಎ.ಎಸ್. ಸೌಲಭ್ಯಗಳನ್ನು ಪೂರ್ವಾನ್ವಯವಾಗಿ ಮಂಜೂರು ಮಾಡತಕ್ಕದ್ದಲ್ಲ.

6. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಈಗಾಗಲೇ ಸೌಲಭ್ಯಗಳನ್ನು ಮಂಜೂರು ಮಾಡಲಾಗಿರುವ ಹಾಗೂ ಮುಂದೆ ಮಾಡಲಾಗುವ ಎಲ್ಲಾ ಪ್ರಕರಣಗಳನ್ನು ಕಡ್ಡಾಯವಾಗಿ ವಿವರವಾದ ಲೆಕ್ಕಪರಿಶೋಧನೆಗೆ ಒಳಪಡಿಸಿ, ಎಲ್ಲಾ ಷರತ್ತುಗಳನ್ನು ಮತ್ತು ಎಐಸಿಟಿಇಯು ನಿಗದಿಪಡಿಸಿರುವ ಅರ್ಹತೆಗಳನ್ನು ಪೂರೈಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. ಈಗಾಗಲೇ ಸದರಿ ಯೋಜನೆಯಡಿ ಸಿ.ಎ.ಎಸ್. ಸೌಲಭ್ಯಗಳನ್ನು ನೀಡಲಾಗಿರುವ 461 ಪ್ರಕರಣಗಳಿಗೆ ಸಂಬಂಧಿಸಿದಂತೆ ಹಾಗೂ ಸರ್ಕಾರದ ಅನುಮೋದನೆ ಪಡೆಯದೇ ಸಿ.ಎ.ಎಸ್ ಮಂಜೂರು ಮಾಡಿರುವ ಇತರೆ ಪ್ರಕರಣಗಳಿದ್ದಲ್ಲಿ ಅಂತಹ ಪ್ರಕರಣಗಳನ್ನು ಸಹ ಲೆಕ್ಕಪರಿಶೋಧನೆಗೆ ಒಳಪಡಿಸಿ, ಎಐಸಿಟಿಯು ವಿಧಿಸಿರುವ ಎಲ್ಲಾ ಷರತ್ತುಗಳನ್ನು ಪೂರೈಸಿರುವ ಹಾಗೂ ವಿದ್ಯಾರ್ಹತೆಯನ್ನು ಹೊಂದಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.

7. ಎಐಸಿಟಿಇಯ ನಿಯಮಾವಳಿಗಳಂತೆ ರಚಿಸಲಾದ ತಜ್ಞರ ಸಮಿತಿ ಅಂದರೆ Screening cum Evaluation ಸಮಿತಿಯು ಎಐಸಿಟಿಇಯ ನಿಯಮಾವಳಿಗಳು/ಮಾನದಂಡಗಳಂತೆ ಪರಿಶೀಲಿಸಿ ಶಿಫಾರಸ್ಸು ಮಾಡಿದ ನಂತರ ಸರ್ಕಾರದ ಪೂರ್ವಾನುಮೋದನೆ ಪಡೆದು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯಗಳನ್ನು ಮಂಜೂರು ಮಾಡತಕ್ಕದ್ದು.

......4

8. ಒಂದು ವೇಳೆ ಎಐಸಿಟಿಇಯು ವಿಧಿಸಿರುವ ಮಾನದಂಡಗಳು/ಷರತ್ತುಗಳನ್ನು ಪೂರೈಸದೆ ಇರುವ ಬೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯಗಳನ್ನು ವಿಸ್ತರಿಸಿರುವುದು ಲೆಕ್ಕಪರಿಶೋಧನೆಯ ನಂತರ ಕಂಡುಬಂದ್ದಲ್ಲಿ ಅಂತಹ ಬೋಧಕರಿಗೆ ವೇತನವನ್ನು ಪುನರ್ ನಿಗದಿಪಡಿಸುವುದು ಹಾಗೂ ಒಂದು ವೇಳೆ ಹೆಚ್ಚಿಗೆ ವೇತನವನ್ನು ಪಾವತಿ ಮಾಡಿದ್ದಲ್ಲಿ ಅಂತಹ ಬೋಧಕ ಸಿಬ್ಬಂದಿಗೆ ಸಂಬಂಧಪಟ್ಟ ಪ್ರಾಧಿಕಾರವು ನೋಟಿಸ್ ನೀಡುವ ಮೂಲಕ ಹೆಚ್ಚುವರಿಯಾಗಿ ನೀಡಲಾಗಿರುವ ಬಾಬ್ತು/ವೇತನವನ್ನು ಸುಲಭ ಕಂತುಗಳಲ್ಲಿ ವೇತನದಿಂದ ಕಡ್ಡಾಯವಾಗಿ ವಸೂಲಿ ಮಾಡಲು ಕ್ರಮಕೈಗೊಳ್ಳುವುದು.

9. ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯಗಳನ್ನು ಮಂಜೂರು ಮಾಡುವಲ್ಲಿ ಎಐಸಿಟಿಇಯ ನಿಯಮಗಳನ್ನು ಪಾಲಿಸದೇ ನಿರ್ಧಾರ ಕೈಗೊಂಡಿದ್ದಲ್ಲಿ ಅಂತಹ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮವನ್ನು ಜರುಗಿಸಲು ಕ್ರಮವಹಿಸತಕ್ಕದ್ದು.

10. ಎಐಸಿಟಿಇಯ ನಿಯಮಗಳನ್ನು ಅನುಸರಿಸದೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯಗಳನ್ನು ಹೆಚ್ಚುವರಿಯಾಗಿ ಪಾವತಿ ಮಾಡಿದ್ದಲ್ಲಿ ಅಥವಾ ಭವಿಷ್ಯದಲ್ಲಿ ಮಾಡಿದಂತಹ ಸಂದರ್ಭಗಳಲ್ಲಿ ವೇತನ/ಪಿಂಚಣಿಯಿಂದ ಕಟಾಯಿಸಿಕೊಳ್ಳಲು/ಮರುಹೊಂದಿಸಿಕೊಳ್ಳಲು ಒಪ್ಪಿರುತ್ತೇನೆಂದು ಸಂಬಂಧಪಟ್ಟ ಬೋಧಕ ಸಿಬ್ಬಂದಿಗಳಿಂದ ಒಪ್ಪಿಗೆ/ಮುಚ್ಚಳಿಕೆ ಪತ್ರವನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

11. ಬೋಧಕರ ಸೇವಾ ವಿಷಯಗಳು ಹಾಗೂ ಷರತ್ತುಗಳಿಗೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ನಿಯಮಗಳು/ ಆದೇಶಗಳು ಯಥಾವತ್ತಾಗಿ ಅನ್ವಯವಾಗುತ್ತವೆ ಹಾಗೂ ರಾಜ್ಯ ಸರ್ಕಾರವು ಜಾರಿಗೆ ತಂದಿರುವ 'The Karnataka Regulation of Pay and Pension of Teachers in Higher Educational Instuitions Act, 2020'ರಲ್ಲಿನ ಮಾರ್ಗಸೂಚಿಗಳು ಸಂಬಂಧಿಸಿದ್ದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 1085 Exp-8/2018, ದಿನಾಂಕ: 21.02.2019 ಹಾಗೂ ಸಂಖ್ಯೆ: FD 739 Ser-2/2019, ದಿನಾಂಕ:02.11.2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

10/11/2020
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:
1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) & (ಇ&ಆರ್‌ಎಸ್‌ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು - 560 001.

2) ಪ್ರಧಾನ ಮಹಾಲೇಖಪಾಲರು (ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು – 560 001.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ಮುಖಾಂತರ).
6) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿ.
8) ಸರ್ಕಾರದ ಜಂಟಿ ಕಾರ್ಯದರ್ಶಿ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ)ರವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ.
9) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)ರವರ ಆಪ್ತ ಸಹಾಯಕರು.
10) ಪತ್ರಿಕಾ ಮೇಜು.
11) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ).
12) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ/ ಒಡಿಜಿಸಿ.

****

ಕರ್ನಾಟಕ ಸರ್ಕಾರ 19174851/2020

ಸಂಖ್ಯೆ: ಇಡಿ 167 ಡಿಟಿಇ 2017.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ: 11/11/2020.

**:ತಿದ್ದುಪಡಿ ಆದೇಶ:**

ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ:10.11.2020ರಲ್ಲಿ 2006ರ (ಪರಿಷ್ಕೃತ) ಎ.ಐ.ಸಿ.ಟಿ.ಇ. ವೇತನ ಶ್ರೇಣಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ (ಉಪನ್ಯಾಸಕರಿಗೆ) **"ಎ.ಪಿ.ಐ. ಸ್ಕೋರ್ ಆಧಾರಿತ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ"**ಯನ್ನು ಅನುಷ್ಠಾನಗೊಳಿಸುವ ಬಗ್ಗೆ ಆದೇಶ ಹೊರಡಿಸಲಾಗಿರುತ್ತದೆ. ಸದರಿ ಆದೇಶದ ಕಂಡಿಕೆ (2)ರಲ್ಲಿನ 4ನೇ ಸಾಲಿನಲ್ಲಿ ನಮೂದಿಸಲಾಗಿರುವ ದಿನಾಂಕ:01.01.2006 ಎಂಬುದರ ಬದಲಾಗಿ ದಿನಾಂಕ:01.04.2011 ಎಂದು ತಿದ್ದಿ ಓದಿಕೊಳ್ಳತಕ್ಕದ್ದು. ಉಳಿದಂತೆ ಯಾವುದೇ ಬದಲಾವಣೆಗಳಿರುವುದಿಲ್ಲ.

EST 1(B)

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಆಪ್ತ ಶಾಖೆ.
ಸಂಖ್ಯೆ 916
ದಿನಾಂಕ 12 NOV 2020

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/11/2020
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) & (ಇ&ಆರ್‌ಎಸ್‌ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು – 560 001.
2) ಪ್ರಧಾನ ಮಹಾಲೇಖಪಾಲರು (ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು – 560 001.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ಮುಖಾಂತರ).
6) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿ.
8) ಸರ್ಕಾರದ ಜಂಟಿ ಕಾರ್ಯದರ್ಶಿ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ)ರವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ.
9) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)ರವರ ಆಪ್ತ ಸಹಾಯಕರು.
10) ಪತ್ರಿಕಾ ಮೇಜು.
11) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ).
12) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ/ ಒಡಿಜಿಸಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 167 ಡಿಟಿಇ 2017.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ:04/12/2020.

19942274/2020

1104

05/12/2020

(DT 1B)

**:ತಿದ್ದುಪಡಿ ಆದೇಶ-2:**

ಸರ್ಕಾರದ ಆದೇಶ ಸಂಖ್ಯೆ: ಇಡಿ 167 ಡಿಟಿಇ 2017, ದಿನಾಂಕ:10.11.2020ರಲ್ಲಿ 2006ರ (ಪರಿಷ್ಕೃತ) ಎ.ಐ.ಸಿ.ಟಿ.ಇ. ವೇತನ ಶ್ರೇಣಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ (ಉಪನ್ಯಾಸಕರಿಗೆ) **"ಎ.ಪಿ.ಐ. ಸ್ಕೋರ್ ಆಧಾರಿತ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ"**ಯನ್ನು ಅನುಷ್ಠಾನಗೊಳಿಸುವ ಬಗ್ಗೆ ಆದೇಶ ಹೊರಡಿಸಲಾಗಿರುತ್ತದೆ ಹಾಗೂ ದಿನಾಂಕ:11.11.2020ರಲ್ಲಿ ತಿದ್ದುಪಡಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಮುಂದುವರೆದು, ಸದರಿ ಆದೇಶದಲ್ಲಿ ಈ ಕೆಳಕಂಡಂತೆ ತಿದ್ದುಪಡಿ ಮಾಡಿ ಆದೇಶಿಸಿದೆ. ಉಳಿದಂತೆ ಯಾವುದೇ ಬದಲಾವಣೆಗಳಿರುವುದಿಲ್ಲ.

| ಕ್ರ.ಸಂ. | ಭಾಗ/ಕಂಡಿಕೆ | ಪ್ರಸ್ತುತ ಕಂಡಿಕೆ | ತಿದ್ದುಪಡಿ ಮಾಡಲಾದ ಕಂಡಿಕೆ |
|---|---|---|---|
| 1 | ವಿಷಯ | 2006ರ (ಪರಿಷ್ಕೃತ) ಎ.ಐ.ಸಿ.ಟಿ.ಇ. ವೇತನ ಶ್ರೇಣಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ (ಉಪನ್ಯಾಸಕರಿಗೆ) **"ಎ.ಪಿ.ಐ. ಸ್ಕೋರ್ ಆಧಾರಿತ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ"**ಯನ್ನು ಅನುಷ್ಠಾನಗೊಳಿಸುವ ಬಗ್ಗೆ. | ಎ.ಐ.ಸಿ.ಟಿ.ಇ. ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಬೋಧಕ ಸಿಬ್ಬಂದಿಗಳಿಗೆ (ಉಪನ್ಯಾಸಕರು) ಎ.ಪಿ.ಐ. ಅಂಕಗಳ ಆಧಾರಿತ ವೃತ್ತಿ ಪದೋನ್ನತ್ತಿ (CAS) ಸೌಲಭ್ಯವನ್ನು ಅನುಷ್ಠಾನಗೊಳಿಸುವ ಬಗ್ಗೆ. |
| 2 | ಆದೇಶ ಭಾಗದ ಕಂಡಿಕೆ 11 | ಬೋಧಕರ ಸೇವಾ ವಿಷಯಗಳು ಹಾಗೂ ಷರತ್ತುಗಳಿಗೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ನಿಯಮಗಳು/ ಆದೇಶಗಳು ಯಥಾವತ್ತಾಗಿ ಅನ್ವಯವಾಗುತ್ತವೆ ಹಾಗೂ ರಾಜ್ಯ ಸರ್ಕಾರವು ಜಾರಿಗೆ ತಂದಿರುವ 'The Karnataka Regulation of Pay and Pension of Teachers in Higher Educational Instuitions Act, 2020'ರಲ್ಲಿನ ಮಾರ್ಗಸೂಚಿಗಳು ಸಂಬಂಧಿಸಿದ್ದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು. | ಬೋಧಕ ಸಿಬ್ಬಂದಿಗಳ ಸೇವಾ ವಿಷಯಗಳು ಹಾಗೂ ಷರತ್ತುಗಳಿಗೆ ಸಂಬಂಧಿಸಿದಂತೆ, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ/ ಹೊರಡಿಸುವ ನಿಯಮಗಳು/ ಆದೇಶಗಳು ಸಂದರ್ಭಾನುಸಾರ ಮುಂದುವರೆದು ಅನ್ವಯವಾಗತಕ್ಕದ್ದು. ವೃತ್ತಿ ಪದೋನ್ನತಿ ಸೌಲಭ್ಯಗಳ ಮಂಜೂರಾತಿಯೂ ಸೇರಿದಂತೆ ಬೋಧಕ ಸಿಬ್ಬಂದಿಗಳ ವೇತನ ಮತ್ತು ಪಿಂಚಣಿ ಸಂಬಂಧಿತ ವಿಷಯಗಳನ್ನು ರಾಜ್ಯ ಸರ್ಕಾರವು ಜಾರಿಗೆ ತಂದಿರುವ 'The Karnataka Regulation of Pay and Pension of Teachers in |

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
318
ನಾ. 7/12/2020
ಬೆಂಗಳೂರು-1

| | | | |
|---|---|---|---|
| | | | Higher Educational Instuitions Act, 2020'ರಲ್ಲಿನ ಅವಕಾಶಗಳ ಪ್ರಕಾರ ಪರಿಗಣಿಸಿ ನಿರ್ಧಾರ ಕೈಗೊಳ್ಳತಕ್ಕದ್ದು. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

04/12/2020
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಇದನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ) & (ಇ&ಆರ್ಎಸ್ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು – 560 001.
2) ಪ್ರಧಾನ ಮಹಾಲೇಖಪಾಲರು (ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು – 560 001.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ತಾಂತ್ರಿಕ ಶಿಕ್ಷಣ ಇಲಾಖೆಯ ನಿರ್ದೇಶಕರ ಮುಖಾಂತರ).
6) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆರವರ ಆಪ್ತ ಕಾರ್ಯದರ್ಶಿ.
8) ಸರ್ಕಾರದ ಜಂಟಿ ಕಾರ್ಯದರ್ಶಿ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ)ರವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ.
9) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)ರವರ ಆಪ್ತ ಸಹಾಯಕರು.
10) ಪತ್ರಿಕಾ ಮೇಜು.
11) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ).
12) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ/ ಒಡಿಜಿಸಿ.